**ಕರ್ನಾಟಕ ಸರ್ಕಾರ**
**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತರೀಕೆರೆ.**

**ಸಿ.ಸಿ. ನಂ.235/2014.**

ಪಿ.ಡಬ್ಲ್ಯೂ: 13
ಸಿ.ಡಬ್ಲ್ಯೂ: 13

| | |
|---|---|
| ಹೆಸರು | : ರಾಜ್ ಕುಮಾರ್.ಎಂ.ಆರ್. |
| ತಂದೆಯ ಹೆಸರು | : ಜಟ್ಟಂಗಿ ರಾಮೇಗೌಡ |
| ವಯಸ್ಸು | : 40 ವರ್ಷ |
| ಉದ್ಯೋಗ | : ಪಿ.ಸಿ-15 |
| ವಾಸಸ್ಥಳ | : ಅಜ್ಜಂಪುರ ಪೊಲೀಸ್ ಠಾಣೆ |

**ದಿನಾಂಕ: 22-12-2017 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ : ಸ.ಸ.ಅ. ರವರಿಂದ.**

2011 ರಿಂದ ಜೂನ್-2015 ರವರೆಗೆ ನಾನು ತರೀಕೆರೆ ಪೊಲೀಸ್ ಠಾಣೆಯಲ್ಲಿ ಪೊಲೀಸ್ ಪೇದೆ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿ:06-06-2013 ರಂದು ನಾನು ಮತ್ತು ಚಾಸಾ-12 ರವರು ಅಪರಾಧ ವಿಭಾಗದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು ಠಾಣಾ ಕರ್ತವ್ಯದಲ್ಲಿದ್ದಾಗ ಪೊಲೀಸ್ ನಿರೀಕ್ಷಕಾರಾದ ಚಾಸಾ-14 ರವರು ನಮ್ಮನ್ನು ಕರೆದು ಈ ಪ್ರಕರಣಕ್ಕೆ ಸಂಬಂಧಿಸಿದ ಆರೋಪಿಯು ಕಡೂರಿನಲ್ಲಿ ಇರುವುದಾಗಿ ಮಾಹಿತಿ ಬಂದಿದೆ ಹೋಗೋಣ ಎಂದು ಇಲಾಖಾ ಜೀಪ್ ನಲ್ಲಿ ನಮ್ಮನ್ನು ಕರೆದುಕೊಂಡು ಬೆಳಿಗ್ಗೆ 09.30 ಗಂಟೆಗೆ ಹೊರಟು ಆರೋಪಿಯನ್ನು ಕಡೂರು ರೈಲ್ವೇ ನಿಲ್ದಾಣದಲ್ಲಿ ಬಾತ್ಮಿದಾರರ ಮೂಲಕ ಪತ್ತೆ ಮಾಡಿ ನ್ಯಾಯಾಲಯದ ಮುಂದೆ ಇರುವ ಆರೋಪಿಯನ್ನು ವಶಕ್ಕೆ ಪಡೆದುಕೊಂಡು ಆರೋಪಿಯನ್ನು ಕರೆದುಕೊಂಡು ಮರಳಿ ಪೊಲೀಸ್ ಠಾಣೆಗೆ ಬಂದಿರುತ್ತೇವೆ. ಪೊಲೀಸ್ ನಿರೀಕ್ಷಕರು ಮುಂದಿನ ಕ್ರಮವನ್ನು ಜರುಗಿಸಿರುತ್ತಾರೆ. ನಾನು ತನಿಖಾಧಿಕಾರಿಕಗಳಿಗೆ ಈ ಕುರಿತು ನನ್ನ ಹೇಳಿಕೆಯನ್ನು ನೀಡಿರುತ್ತೇನೆ.

***<u>ಪಾಟೀಸವಾಲು : ಆರೋಪಿ ಪರ ವಕೀಲರಿಂದ.</u>***

ನಾನು ನನ್ನ ಮೇಲಾಧಿಕಾರಿಗಳ ಮಾತನ್ನು ಕೇಳಿ ಆರೋಪಿತನ ವಿರುದ್ಧ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಮರುವಿಚಾರಣೆ:</u> ಇರುವುದಿಲ್ಲ.**

***(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)***

***ಓ. ಕೇ. ಸ. ಇ. ಎ. ಒ.***

ಸಹಿ/-
**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
***ಪ್ರ.ದ.ನ್ಯಾ.ದಂ. ರವರು, ತರೀಕೆರೆ.***